ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-1.
ದೂ. 080-22372738 E-mail: nregs-ka@nic.in

ಗ್ರಾಅಪ 298 ಉಖಾಯೋ 2016 ದಿನಾಂಕ: 01-04-2016

**ಸುತ್ತೋಲೆ**

ವಿಷಯ: ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕಾರ್ಮಿಕರ ಕನಿಷ್ಠ ಕೂಲಿದರವನ್ನು ಪರಿಷ್ಕರಿಸಿ ದಿನಾಂಕ: 01-04-2016ರಿಂದ ಅನ್ವಯವಾಗುವಂತೆ ಜಾರಿಗೊಳಿಸುವ ಕುರಿತು.

ಉಲ್ಲೇಖ: ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದವರ ಅಧೀನ ಕಾರ್ಯದರ್ಶಿಯವರ ಪತ್ರದ ಸಂಖ್ಯೆ: J-11011/1/2009-MGNREGA(pt) ದಿನಾಂಕ: 29-03-2016

~~~~~~

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಅಧಿನಿಯಮದ ಪ್ರಕರಣ 6(1)ರನ್ವಯ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುತ್ತಿರುವ ಅಕುಶಲ ಕಾರ್ಮಿಕರಿಗೆ ಪ್ರಸ್ತುತ ಪಾವತಿಸುತ್ತಿರುವ ಕೂಲಿದರವನ್ನು ರೂ. 204/- ರಿಂದ ರೂ. 224/-ಗಳಿಗೆ ಹೆಚ್ಚಿಸಿ ದಿನಾಂಕ: 01-04-2016 ರಿಂದ ಅನ್ವಯವಾಗುವಂತೆ ರಾಜ್ಯ ಎಲ್ಲಾ ಜಿಲ್ಲೆಗಳಲ್ಲಿ ಜಾರಿಗೊಳಿಸಲು ಕೇಂದ್ರ ಸರ್ಕಾರವು ರಾಜ್ಯ ಪತ್ರದಲ್ಲಿ ಪ್ರಕಟಿಸಿರುವ ಅಧಿಸೂಚನೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಟ್ಟಿರುತ್ತಾರೆ. ಪ್ರತಿ ಲಗತ್ತಿಸಿದೆ. ಆದ ಪ್ರಯುಕ್ತ ಪರಿಷ್ಕೃತ ಕೂಲಿ ದರವನ್ನು ದಿನಾಂಕ: 01-04-2016ರಿಂದ ಅಕುಶಲ ಕಾರ್ಮಿಕರಿಗೆ ಕೂಡಲೇ ಪಾವತಿಸಲು ಕ್ರಮವಹಿಸುವಂತೆ ಸೂಚಿಸಿದೆ.

ಕೂಲಿದರದ ಪರಿಷ್ಕರಣೆಯಿಂದ ಸಾಮಗ್ರಿ ವೆಚ್ಚದ ದರ ರೂ. 149.33 ಪೈಸೆಗಳಾಗಿರುತ್ತದೆ. ಆಡಳಿತಾತ್ಮಕ ವೆಚ್ಚದ ದರ ರೂ. 22.40 ಪೈಸೆಗಳಾಗಿರುತ್ತದೆ. ಆದ್ದರಿಂದ ದಿನ ಒಂದಕ್ಕೆ ಘಟಕದ ವೆಚ್ಚದ ದರವು ಒಬ್ಬ ಕೂಲಿ ಕಾರ್ಮಿಕನಿಗೆ ಕೂಲಿ ವೆಚ್ಚ, ಸಾಮಗ್ರಿ ವೆಚ್ಚ ಮತ್ತು ಆಡಳಿತಾತ್ಮಕ ವೆಚ್ಚವು ಸೇರಿದಂತೆ ರೂ. 395.73 ಪೈಸೆಗಳನ್ನು ವೆಚ್ಚ ಮಾಡಬೇಕಾಗಿರುತ್ತದೆ. ಯಾವುದೇ ಕಾರಣಕ್ಕೂ ಈಗ ಹೇಳಿರುವ ಘಟಕದ ವೆಚ್ಚದ ದರವು ಮೀರದಂತೆ ಕಾಮಗಾರಿಗಳ ಅನುಷ್ಠಾನದಲ್ಲಿ ಎಚ್ಚರವಹಿಸುವುದು. ಆದ್ದರಿಂದ ಈ ಘಟಕದ ವೆಚ್ಚದ ದರವನ್ನು ಯೋಜನೆಯ ಅನುಷ್ಠಾನದಲ್ಲಿ ಅಳವಡಿಸಿಕೊಂಡು ಕಾಮಗಾರಿಗಳನ್ನು ನಿರ್ವಹಿಸಲು ಕ್ರಮವಹಿಸುವಂತೆ ಈ ಮೂಲಕ ಸೂಚಿಸಿದೆ.

ಕೇಂದ್ರ ಸರ್ಕಾರವು 2015-16ನೇ ಸಾಲಿಗೆ ಕೂಲಿದರವನ್ನು ಅಕುಶಲ ಕೂಲಿಕಾರ್ಮಿಕರಿಗೆ ರೂ. 224.00ನ್ನು ನಿಗಧಿಪಡಿಸಿರುವುದರಿಂದ ಒಂದು ದಿನಕ್ಕೆ ತಗಲುವ ವೆಚ್ಚ ಕೂಲಿ, ಸಾಮಗ್ರಿ ಮತ್ತು ಆಡಳಿತಾತ್ಮಕ ವೆಚ್ಚವು ಸೇರಿದಂತೆ (i.e Cost perday) ರೂ. 395.73 ಪೈಸೆ ಆಗುತ್ತದೆ. (ಕೂಲಿ+ಸಾಮಗ್ರಿ+ಆಡಳಿತಾತ್ಮಕ ವೆಚ್ಚ = ರೂ. 224.00 + ರೂ. 149.33 + ರೂ. 22.40 = ರೂ. 395.73 ಪೈಸೆ).

4/4/16

(ಮುನೀಷ್ ಮೌದ್ಗಿಲ್)
ಆಯುಕ್ತರು ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
2. ರಾಜ್ಯದ ಎಲ್ಲಾ ತಾಲ್ಲೂಕು ಕಾರ್ಯ ಪಂಚಾಯತಿಗಳ ಕಾಯನಿರ್ವಾಹಕ ಅಧಿಕಾರಿಗಳು
~~~~~~

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ/ವಿಕಾಸ ಸೌಧ/ವಿಧಾನ ಸೌಧ.
6. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
8. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾಜಿಕ ಅರಣ್ಯ), ಅರಣ್ಯ ಇಲಾಖೆ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
9. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
10. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು,
11. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
12. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್ ಬಾಗ್ ರಸ್ತೆ, ಬೆಂಗಳೂರು.
14. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು.
15. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ) ಉತ್ತರವಲಯ ಬಿಜಾಪುರ/ದಕ್ಷಿಣವಲಯ, ಕೆ.ಆರ್.ವೃತ್ತ, ಬೆಂಗಳೂರು.
16. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಬೆಂಗಳೂರು.
17. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
18. ಆಯುಕ್ತರು ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ, ಗ್ರಾಮೀಣ ನೀರು ಸರಬರಾಜು ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಾವೇರಿ ಭವನ, ಬೆಂಗಳೂರು
19. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು-570011.
20. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು.
21. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
22. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಎಲ್ಲಾ ಅಧಿಕಾರಿಗಳಿಗೆ.
23. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
24. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
25. ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ಹಾಗೂ ಸದರಿ ಮಾಹಿತಿಯನ್ನು ಇಲಾಖಾ ವೆಬ್ ಸೈಟಿನಲ್ಲಿ ಅಳವಡಿಸಲು ಕೋರಿದೆ.
26. ಶ್ರೀ ವೈ.ಮಹಾಂಕಾಳಪ್ಪ, ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ರವಾನಿಸುತ್ತಾ, ಸದರಿ ಆದೇಶದ ಮಾಹಿತಿಯನ್ನು ಕರ್ನಾಟಕ ವಿಕಾಸದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.
27. ಹೆಚ್ಚಿನ ಪ್ರತಿ/ ಮಹಾ ಕಡತಕ್ಕೆ.